14

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪರಿಸರ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 6/6/20

# ಅತಿ ಬಳಕೆಯಿಂದ ಪರಿಸರದಲ್ಲಿ ವ್ಯತ್ಯಯ

## ಸಿಎಂ ಯಡಿಯೂರಪ್ಪ ಕಳವಳ | ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 6/6/20

ಆಧುನಿಕ ಜೀವನ ಶೈಲಿ, ಮಿತಿ ಮೀರಿ ಸಂಪನ್ಮೂಲ ಬಳಕೆಯಿಂದ ಪರಿಸರ ಅಸಮತೋಲನ ಉಂಟಾಗಿ ಹಲವು ವೈಪರಿತ್ಯಗಳು ಸಂಭವಿಸುತ್ತಿವೆ, ಅಪರೂಪದ ಪ್ರಾಣಿ-ಪಕ್ಷಿಗಳು, ಜಲಚರಗಳು ನಶಿಸುತ್ತಿವೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಶುಕ್ರವಾರ ಕಳವಳ ವ್ಯಕ್ತಪಡಿಸಿದರು.

ಗೃಹ ಕಚೇರಿ 'ಕೃಷ್ಣಾ'ದಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪರಿಸರ ಗೀತೆ, ಯುಟ್ಯೂಬ್ ಚಾನಲ್ ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿಯ ಬಳಕೆದಾರ ಸ್ನೇಹಿ ವೆಬ್‌ಸೈಟ್‌ಗೆ ಚಾಲನೆ ನೀಡಿ ಮಾತನಾಡಿದರು. ಈ ಬಾರಿ ಪರಿಸರ ದಿನಾಚರಣೆಯ ವಿಷಯ 'ಜೀವ ವೈವಿಧ್ಯ' ಪ್ರಮುಖ ಸಂದೇಶ ಸಾರುತ್ತಿದ್ದು, ಜೀವ ವೈವಿಧ್ಯ ಇದ್ದಾಗ ಮಾತ್ರ ಪರಿಸರ ಸಮತೋಲನ ಕಾಪಾಡಲು ಸಾಧ್ಯ, ಹಸಿರು ಉಸಿರಾಗಬೇಕು ಎಂದು ಸಲಹೆ ನೀಡಿದರು.

ಪರಿಸರ ದಿನಾಚರಣೆ ಸಂದರ್ಭದಲ್ಲಿ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯು ಹಮ್ಮಿಕೊಂಡಿರುವ ಡಿಜಿಟಲ್ ಅಭಿಯಾನ 25 ಲಕ್ಷಕ್ಕೂ ಹೆಚ್ಚು ಜನರನ್ನು ತಲುಪಿರುವುದು ಸಂತಸದ ಸಂಗತಿ ಎಂದು ಸಿಎಂ ಮೆಚ್ಚುಗೆ ವ್ಯಕ್ತಪಡಿಸಿದರು.



ವಿಜಯವಾಣಿ ಚಿತ್ರ

ಮುಖ್ಯಮಂತ್ರಿ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಏರ್ಪಡಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪರಿಸರ ಗೀತೆ, ಯುಟ್ಯೂಬ್ ಚಾನಲ್, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ವೆಬ್‌ಸೈಟ್‌ಗೆ ಸಿಎಂ ಯಡಿಯೂರಪ್ಪ ಚಾಲನೆ ನೀಡಿದರು. ಸಚಿವರಾದ ಆನಂದ್ ಸಿಂಗ್, ಬಸವರಾಜ ಬೊಮ್ಮಾಯಿ, ಸಿ.ಟಿ.ರವಿ, ಇಲಾಖೆ ಅಧಿಕಾರಿಗಳು ಇದ್ದರು.

ಸಚಿವರಾದ ಆನಂದ್ ಸಿಂಗ್, ಬಸವರಾಜ ಬೊಮ್ಮಾಯಿ, ಸಿ.ಟಿ.ರವಿ, ಅರಣ್ಯ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಸಂದೀಪ್ ದವೆ, ಜೀವ ವೈವಿಧ್ಯ ಮಂಡಳಿ ಅಧ್ಯಕ್ಷ ಅನಂತ ಹೆಗಡೆ ಆಶೀಸರ, ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ವಿಜಯಕುಮಾರ್ ಗೋಗಿ, ಸದಸ್ಯ ಕಾರ್ಯದರ್ಶಿ ಶ್ರೀನಿವಾಸುಲು ಇದ್ದರು.

**ಲಾಕ್‌ಡೌನ್‌ನಿಂದ ಪರಿಸರ ಪುನಶ್ಚೇತನ:** ಕರೊನಾ ಸೋಂಕು ತಡೆಗಟ್ಟಲು ಜಾರಿಗೊಳಿಸಿದ ಲಾಕ್‌ಡೌನ್‌ನಿಂದ ಜನ-ಜೀವನ ಅಸ್ತವ್ಯಸ್ತ, ಸಾಕಷ್ಟು ಕಷ್ಟ-ನಷ್ಟಗಳು ಅನುಭವಿಸಿದ್ದರೂ ಈ ಅವಧಿಯಲ್ಲಿ ಅನೇಕ ಪ್ರಾಣಿ-ಪಕ್ಷಿಗಳು, ಜಲಚರಗಳು ಸ್ವಚ್ಛಂದವಾಗಿ ವಿಹರಿಸಿದವು. ಮಾಲಿನ್ಯದ ಪ್ರಮಾಣ ಗಣನೀಯವಾಗಿ ತಗ್ಗಿದ್ದು, ಪರಿಸರ ಪುನಶ್ಚೇತನಗೊಂಡಿರುವುದು ಸಮಾಧಾನ ತಂದಿದೆ ಎಂದು ಬಿಎಸ್‌ವೈ ಹೇಳಿದರು.